# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ ಕಟ್ಟಡ ಜಯಂತಿ ನಗರ ವೃತ್ತ ಹೊರಮಾವು/ಕಲ್ಕೆರೆ ಮುಖ್ಯರಸ್ತೆ,**
**ಹೊರಮಾವು ಗ್ರಾಮ, ಬೆಂಗಳೂರು- 560113**

ಸಂಖ್ಯೆ:ಬಿಬಿಎಂಪಿ/ಸ.ಕಾ.ಅ/ಹೊಉವಿ/ಪಿಆರ್/13 /2021-22 ದಿನಾಂಕ: 03.04.2021

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)ಪಿಆರ್/35/ 2020-21 ದಿನಾಂಕ:21/09/2020 ಹಾಗೂ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವರು ದಿನಾಂಕ:-03.04.2021 ರಂದು ಹೊರಮಾವು ಉಪವಿಭಾಗದ ವಾರ್ಡ್-25 ರ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿದ್ದು, ಹಾಗೂ ಮಾನ್ಯ ವಿಶೇಷ ಆಯುಕ್ತರು (ಹಣಕಾಸು) ರವರ ಆದೇಶದ ಮೇರೆಗೆ ಈ ಮಾಹೆಯ ಸಭೆಯಲ್ಲಿ 2021-22 ನೇ ಸಾಲಿನಲ್ಲಿ ಮಂಡಿಸುವ ಆಯವ್ಯಯಕ್ಕೆ ಸಂಬಂಧಪಟ್ಟಂತೆ ಸಾರ್ವಜನಿಕರಿಂದ ಸಲಹೆಗಳನ್ನು ಪಡೆಯುವ ಸಲುವಾಗಿ ಸಭೆಯನ್ನು ಏರ್ಪಡಿಸಲಾಗಿದ್ದು, ಸಭೆಯ ನಡವಳಿಗಳು ಈ ಕೆಳಕಂಡಂತಿರುತ್ತದೆ.

ಉಪಸ್ಥಿತರು:

| ಕ್ರ.ಸಂ | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| | | ಅಧಿಕಾರಿಗಳು | |
| 1 | ಶ್ರೀಮತಿ.ಸರೋಜಾದೇವಿ | ನೋಡಲ್ ಅಧಿಕಾರಿ ವಾ.ಸಂ.25 ಹಾಗೂ ಉಪ ಆಯುಕ್ತರು (ಮಹದೇವಪುರ) | 9480684059 |
| 3 | ಶ್ರೀ.ಚಂದ್ರಶೇಖರ್ ಎ.ಜಿ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೊರಮಾವು) | 9844587466 |
| 4 | ಶ್ರೀ. ಸಂಜಯ್ ಕುಮಾರ್ | ಹಿರಿಯ ಆರೋಗ್ಯ ಪರಿವೀಕ್ಷಕರು | 9742919411 |
| 5 | ಶ್ರೀ.ಮಹೇಶ್ | ಕಿರಿಯ ಅಭಿಯಂತರರು ವಾರ್ಡ್-25 | 9739838297 |
| 6 | ಶ್ರೀ.ಮೋಹನರಂಗ | ಜೆ.ಇ. BESCOM | 9449869325 |
| 7 | ಶ್ರೀ.ನಾಗನಂಜಪ್ಪ | ಎ.ಎಸ್.ಐ ಕೆ.ಆರ್.ಪುರಂ ಪೋಲೀಸ್ ಸ್ಟೇಷನ್ | 9986208912 |
| 8 | ಶ್ರೀ.ಕೋದಂಡರಾಮ | ಸ್ಟ್ರೀಟ್ ಲೈಟ್ ಗುತ್ತಿಗೆದಾರರು | |
| | | | |
| 10 | ಶ್ರೀ. ಅಂತೋಣಿ ಸ್ವಾಮಿ ಮತ್ತು ಅಬ್ರಾಹಂ | ಸಾಯಿಬಾಬಾನಗರ ವೆಲ್‌ಫೇರ್ ಅಸೋಸಿಯೇಷನ್ | |
| 11 | ಶ್ರೀ.ಆರ್ಮುಗಂ, ಶ್ರೀ.ದಾಮೋದರನ್ & ಶ್ರೀ ನಂಜಪ್ಪ | ಸರ್.ಎಂ.ವಿ ನಗರ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ | |
| 12 | ಶ್ರೀ.ಕಮಲೇಶ್ | ಬ್ರಿಗೇಡ್ ಅಲ್ಟಮಸ್ ಕೆ.ನಾರಾಯಣಪುರ ಮುಖ್ಯರಸ್ತೆ | |

ಮಾನ್ಯ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವರ ಸಮ್ಮುಖದಲ್ಲಿ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ/ಸಿಬ್ಬಂದಿ ಇತರೆ ಸಂಘ ಸಂಸ್ಥೆಗಳು ಸಾರ್ವಜನಿಕರಿಗೆ ಸುಸ್ವಾಗತ ಕೋರುತ್ತಾ, ಬಿಬಿಎಂಪಿ ವಾರ್ಡ್ ನಂ.25 ರ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯ, ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ, ಬೃಹತ್ ನೀರುಗಾಲುವೆಗಳ ನಿರ್ವಹಣೆ, ಬೀದಿ ದೀಪಗಳ ನಿರ್ವಹಣೆ, ಕಲ್ಯಾಣ ಕಾರ್ಯಕ್ರಮಗಳು, 110 ಹಳ್ಳಿಗಳ ವ್ಯಾಪ್ತಿಯಲ್ಲಿ ಬಿಡಬ್ಲ್ಯೂಎಸ್‌ಎಸ್‌ಬಿ ರವರು ಕೊಳವೆ ಸಾಲುಗಳ ಅಳವಡಿಸುತ್ತಿರುವ ಸಂಬಂಧ ಹಾಗೂ ಸಾರ್ವಜನಿಕರ ಸಮಸ್ಯೆ ಕುಂದುಕೊರತೆಗಳನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿ ಹಾಗೂ ಸಾರ್ವಜನಿಕರಿಗೆ ಸುಸ್ವಾಗತ ಕೋರಿ ಸಭೆಯನ್ನು ಆರಂಭಿಸಿದರು.

ಮು.ಪು.ನೋ

Scanned with CamScanner

<u>ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚೆ:-</u>

**<u>ಶ್ರೀ. ಅಂತೋಣಿ ಸ್ವಾಮಿ ಮತ್ತು ಅಬ್ರಾಹಂ ಸಾಯಿಬಡಾವಣೆ ವೆಲ್‌ಫೇರ್ ಅಸೋಸಿಯೇಷನ್ –</u>** ರವರು ಮಾತನಾಡಿ ಸಾಯಿ ಬಡಾವಣೆ ಕ್ಷೇಮಾಭಿವೃದ್ಧಿ ಸಂಘದವರು ಮಾತನಾಡಿ ಈ ಹಿಂದಿನ ಸಭೆಯಲ್ಲಿ ಪಾಲಿಕೆಯಿಂದ 5 ಮತ್ತು ಇತರೇ ಅಡ್ಡರಸ್ತೆಗಳಿಗೆ ಕುಡಿಯುವ ನೀರು ಸಮರ್ಪಕವಾಗಿ ಸರಬರಾಜು ಆಗದಿರುವ ಬಗ್ಗೆ ಕೋರಿಕೊಂಡಿದ್ದು, ಈಗ ಪಾಲಿಕೆ ಅಭಿಯಂತರರು ಸ್ಥಳ ಪರಿಶೀಲಿಸಿ ತದನಂತರ ನೀರು ಸಮರ್ಪಕವಾಗಿ ಬರುತ್ತಿರುವುದಾಗಿ ತಿಳಿಸಿರುತ್ತಾರೆ. ಪ್ರತಿವರ್ಷ ಮಳೆಗಾಲದಲ್ಲಿ ಹೆಬ್ಬಾಳ ವ್ಯಾಲಿಯ ನೀರು ಮತ್ತು ರಾಜಕಾಲುವೆ ನೀರು ಇಲ್ಲಿನ ಸಾರ್ವಜನಿಕ ಮನೆಗಳಿಗೆ ನುಗ್ಗಿ ಹಾನಿ ಮಾಡುತ್ತಿದ್ದು, 2020ನೇ ಸಾಲಿನ ಮಳೆಗಾಲದಲ್ಲಿಯೂ ಸಹ ತುಂಬಾ ಹಾನಿಯುಂಟು ಮಾಡಿ ಸಾರ್ವಜನಿಕ ಮನೆಗಳ ಟಿ.ವಿ ಮತ್ತು ಎಲೆಕ್ಟ್ರಾನಿಕ್ ವಸ್ತುಗಳು ಸುಟ್ಟುಹೋಗಿದ್ದು, ಮತ್ತು ದಿನಸಿ ಪದಾರ್ಥಗಳು ಹಾಳಾಗಿದ್ದು, ಮನೆಗಳ ಎಲ್ಲಾ ವಸ್ತುಗಳು ನೀರಿನಲ್ಲಿಮುಳುಗಿ ಹಾಳಾಗಿರುತ್ತವೆ. ಮತ್ತು ಈ ಬಡಾವಣೆಯ ಸಾರ್ವಜನಿಕರು ಎಲ್ಲಾ ತೆರಿಗೆಗಳನ್ನು ಪಾಲಿಕೆಗೆ ಕಾಲಕಾಲಕ್ಕೆ ಪಾವತಿಸುತ್ತಿದ್ದು, ಈ ಬಾರಿ ಮಳೆಗಾಲ ಪ್ರಾರಂಭವಾದರೆ ಪ್ರತಿ ವರ್ಷದಂತೆ ನಮ್ಮ ಬಡಾವಣೆಯಲ್ಲಿ ನೀರು ನುಗ್ಗುವ ಸಂಭವವಿದ್ದು, ಅಪೂರ್ಣಗೊಂಡಿರುವ ರಾಜಕಾಲುವೆ ತಡೆಗೋಡೆಯನ್ನು ಇದುವರೆವಿಗೂ ಪ್ರಾರಂಭಿಸಿರುವುದಿಲ್ಲ. ಮತ್ತು ಬಿ.ಡಿ.ಎ ಅರ್ಕಾವತಿ ಬಡಾವಣೆಯಲ್ಲು ಮಳೆ ನೀರು ಚರಂಡಿಯನ್ನು ಪುನರ್‌ನಿರ್ಮಾಣ ಮಾಡಿರುವುದಿಲ್ಲ. ಮತ್ತು ರೈಲ್ವೇ ಸೇತುವೆಯ ಹೆಚ್ಚುವರಿ ವೆಂಟ್‌ನ್ನು ಇದುವರೆವಿಗೂ ಪ್ರಾರಂಭಿಸಿರುವುದಿಲ್ಲ. ಇದರಿಂದ ಮಳೆಗಾಲದಲ್ಲಿ ಪ್ರತಿವರ್ಷ ಮನೆಗಳು ನೀರಿನಲ್ಲಿ ಮುಳುಗಿ ಎಲ್ಲಾ ವಸ್ತುಗಳು ಹಾಳಾಗುತ್ತಿದ್ದು, ಪ್ರತಿ ವರ್ಷ ನಷ್ಟ ಉಂಟಾಗುತ್ತಿರುತ್ತದೆ. ಮತ್ತು ತೆರಿಗೆ ವಿನಾಯಿತಿ ನೀಡಲು ಕೋರಿರುತ್ತಾರೆ.

ಕ್ರಮ:- ಸಹಾಯಕ ಕಂದಾಯ ಅಧಿಕಾರಿ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಿ.ಎ/ ಬಿ.ಡಬ್ಲ್ಯೂ.ಎಸ್.ಎಸ್.ಬಿ ಹೊರಮಾವು ರವರು, ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

**<u>ಶ್ರೀ.ಆರ್ಮುಗಂ, ಶ್ರೀ.ದಾಮೋದರನ್ & ಶ್ರೀ ನಂಜಪ್ಪ ಸರ್.ಎಂ.ವಿ ನಗರ ರೆಸಿಡೆನ್ಷಿಯಲ್ ವೆಲ್‌ಫೇರ್ ಅಸೋಸಿಯೇಷನ್:-</u>** ರವರು ಮಾತನಾಡಿ ಸರ್.ಎಂ.ವಿ ನಗರ 1ನೇ ಹಂತ, 17, 18, 19, ನೇ ರಸ್ತೆಗಳನ್ನು ಅಭಿವೃದ್ಧಿ ಪಡಿಸಿಕೊಡಲು ಮತ್ತು 5ನೇ ಮುಖ್ಯರಸ್ತೆಯಲ್ಲಿ ಕಲ್ವರ್ಟ್ ಅಳವಡಿಸಿಕೊಡಲು ಕೋರಿರುತ್ತಾರೆ.

<u>ಕ್ರಮ:-</u> ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-25 ರವರಿಗೆ ಈ ಕುರಿತು ಕ್ರಮವಹಿಸಲು ಸಭೆಯು ಸೂಚಿಸಲಾಯಿತು.

**<u>ಶ್ರೀ.ಕಮಲೇಶ್, ಬ್ರಿಗೇಡ್ ಆಲ್ಟಮನ್ ಕೆ.ನಾರಾಯಣಪ್ಪರ ಮುಖ್ಯರಸ್ತೆ –</u>** ರವರು ಮಾತನಾಡಿ ಕೆ.ನಾರಾಯಣಪುರ ಕ್ರಿಸ್ತು ಜಯಂತಿ ಕಾಲೇಜು ಮುಖ್ಯರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಈಗಾಗಲೇ ಕೊಳವೆಸಾಲುಗಳನ್ನು ಅಳವಡಿಸಿ ಪೂರ್ಣಗೊಂಡಿದ್ದು, ಸದರಿ ರಸ್ತೆಯು ಸಂಪರ್ಕ ರಸ್ತೆಯಾಗಿದ್ದು, ಸದರಿ ರಸ್ತೆಯನ್ನು ತುರ್ತಾಗಿ ಅಭಿವೃದ್ಧಿಪಡಿಸಿ ಡಾಂಬರೀಕರಣ ಮಾಡಿಕೊಡಲು ಕೋರಿರುತ್ತಾರೆ.

<u>ಕ್ರಮ:-</u> ಸಹಾಯಕ ಕಾರ್ಯಪಾಲಕ ಅಭಿಯಂತರರು ಮಾತನಾಡಿ ಈಗಾಗಲೇ ಸದರಿ ರಸ್ತೆಗೆ 4.00ಕೋಟಿಗಳ ಅನುದಾನ ಬಿಡುಗಡೆಯಾಗಿದ್ದು, ಕಾಮಗಾರಿಗೆ ಟೆಂಡರ್ ಕರೆಯಲಾಗಿದ್ದು, ಕಾರ್ಯಾದೇಶ ನೀಡಿದ ನಂತರ ಕಾಮಗಾರಿಯನ್ನು ತುರ್ತಾಗಿ ಪ್ರಾರಂಭಿಸಲಾಗುವುದೆಂದು ಸಭೆಯಲ್ಲಿ ತಿಳಿಸಲಾಯಿತು.

ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಸ.ಕಾ.ಅ ಹೊರಮಾವು ಉಪ-ವಿಭಾಗ ರವರು ಸಭೆಯಲ್ಲಿ ನುರಿತ ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ವಂದನೆಗಳೊಂದಿಗೆ ನೋಡಲ್ ಅಧಿಕಾರಿಗಳ ಅಪ್ಪಣೆ ಮೇರೆಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ನೋಡಲ್ ಅಧಿಕಾರಿ ವಾರ್ಡ್ ನಂ.25
ಹಾಗೂ ಉಪ ಆಯುಕ್ತರು
(ಮಹದೇವಪುರ) ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಿರಿಯ ಅಭಿಯಂತರರು
ಹೊರಮಾವು ವಾರ್ಡ್‌ನಂ.25
ಬಿ.ಬಿ.ಎಂ.ಪಿ

Scanned with CamScanner